# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1343
2) ಸದಸ್ಯರ ಹೆಸರು : ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು)
3) ಉತ್ತರಿಸುವ ದಿನಾಂಕ : 18-03-2020
4) ಉತ್ತರಿಸಬೇಕಾದ ಸಚಿವರು : ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಮತ್ತು ರಾಜ್ಯದ ಅನುದಾನದ ಪಾಲು ಹಂಚಿಕೆ ಸಂಬಂಧಿಸಿದ ತಗಾದೆಯಿಂದ ಮಂಗಳೂರು ಹಳೇ ಬಂದರಿನ ಮೂರನೇ ಹಂತದ ಮೀನುಗಾರಿಕೆ ಜೆಟ್ಟಿ ವಿಸ್ತರಣಾ ಯೋಜನೆ ನನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. ಸದರಿ ಯೋಜನೆಯನ್ನು ಕೇಂದ್ರ ಪುರಸ್ಕೃತ ಯೋಜನೆಯಡಿ ಕೈಗೊಳ್ಳಲಾಗಿರುತ್ತದೆ. ಈ ಯೋಜನೆಯ ಅನುಷ್ಠಾನದ ವೇಳೆ ಕಾಮಗಾರಿಯಲ್ಲಾದ ವಿನ್ಯಾಸ ಬದಲಾವಣೆಯಿಂದ ಹಾಗೂ ಸದರಿ ಯೋಜನೆಯ ಕುರಿತು ಘನವೆತ್ತ ಉಚ್ಛ ನ್ಯಾಯಾಲಯ ಹಾಗೂ ರಾಷ್ಟ್ರೀಯ ಹಸಿರು ಪೀಠ ನ್ಯಾಯಮಂಡಳಿ, ನವದೆಹಲಿ ಇಲ್ಲಿ ಹೂಡಲಾದ ದಾವೆಯ ಕಾರಣದಿಂದ ಈ ಯೋಜನೆ ವಿಳಂಬವಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | ಸದರಿ ಯೋಜನೆಯ ಅನುಷ್ಠಾನಕ್ಕನುಗುಣವಾಗಿ ಕೇಂದ್ರ ಸರ್ಕಾರದ ಪಾಲಿನ ರೂ.1510.00 ಲಕ್ಷಗಳು ಬಿಡುಗಡೆಗೆ ಬಾಕಿ ಇದ್ದು, ಈ ಮೊತ್ತವನ್ನು ಬಿಡುಗಡೆಗೊಳಿಸುವಂತೆ ಕೇಂದ್ರ ಸರ್ಕಾರವನ್ನು ಈಗಾಗಲೇ ಕೋರಲಾಗಿದೆ.<br><br>ಈ ಯೋಜನೆಯು 2010-11ನೇ ಸಾಲಿನಲ್ಲಿ ಅನುಮೋದನೆಗೊಂಡ ಯೋಜನೆಯಾಗಿದ್ದು, ಕಾಮಗಾರಿಯ ಗುತ್ತಿಗೆದಾರರು 7 ವರ್ಷದ ಹಳೆಯ ದರಗಳಲ್ಲಿ ಕಾಮಗಾರಿಯನ್ನು ನಿರ್ವಹಿಸಲು ಸಾಧ್ಯವಿಲ್ಲವೆಂದು ತಿಳಿಸಿ, ಸದರಿ ಕಾಮಗಾರಿಯ ಗುತ್ತಿಗೆ ಕರಾರನ್ನು ಮುಕ್ತಾಯಗೊಳಿಸುವಂತೆ ಕೋರಿ ಒಪ್ಪಿಗೆ ಪತ್ರವನ್ನು ನೀಡಿರುತ್ತಾರೆ. ಅದರಂತೆ, ಕಾಮಗಾರಿಯ ಉಳಿದ ಘಟಕಗಳನ್ನು ಬೇರೆ ಗುತ್ತಿಗೆದಾರರಿಂದ ಪೂರ್ಣಗೊಳಿಸಲು ಪೂರಕ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಪಸಂಮೀ ಇ-76 ಮೀಇಯೋ 2020

(ಕೋಟ ಶ್ರೀನಿವಾಸ ಪೂಜಾರಿ)
ಮುಜರಾಯಿ, ಮೀನುಗಾರಿಕೆ ಹಾಗೂ
ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು